# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:30.07.2020

## ಸಾರ್ವಜನಿಕ ಪ್ರಕಟಣೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೋವಿಡ್-19 ಸೋಂಕು ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ದಿನಾಂಕ: 31.07.2020 ನಡೆಯುವ ವರಮಹಾಲಕ್ಷ್ಮೀ ಹಬ್ಬ ಹಾಗೂ 01.08.2020 ರಂದು ನಡೆಯುವ ಬಕ್ರಿದ್ ಅನ್ನು ಗುಂಪು ಸೇರದೆ ಸರಳವಾಗಿ ಆಚರಣೆ ಮಾಡಲು ಕೋರಿದೆ.

- ❖ ಹಬ್ಬವನ್ನು ಆದಷ್ಟು ಮನೆಯಲ್ಲೇ ಸರಳವಾಗಿ ಆಚರಣೆ ಮಾಡಿ. ವರಮಹಾಲಕ್ಷ್ಮೀ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸುವ ಬದಲು, ಮನೆಯಲ್ಲಿರುವ ಸಾಮಗ್ರಿಗಳಿಂದಲೇ ಸರಳವಾಗಿ ಆಚರಿಸಿ. ಮನೆ ಮನೆ ಭೇಟಿ ನೀಡದೇ ಇರುವುದು ಸೂಕ್ತವಾಗಿರುತ್ತದೆ.
- ❖ ಹಬ್ಬದ ದಿನ ದೇವಸ್ಥಾನ/ಮಂದಿರ ಹಾಗೂ ಮಸೀದಿಗೆ ಹೋಗುವ ಬದಲು ಮನೆಯಲ್ಲೇ ಆಚರಣೆ ಮಾಡಿಕೊಳ್ಳುವುದು ಸೂಕ್ತ. ಆ ಬಗ್ಗೆ ನಿಮ್ಮ ಸಂಬಂಧಿಕರು ಹಾಗೂ ಪರಿಚಯಸ್ಥರಿಗೆ ಅರಿವು ಮೂಡಿಸಿ.
- ❖ ಹಬ್ಬದ ದಿನ ಸಂಬಂಧಿಕರು ಹಾಗೂ ಸ್ನೇಹಿತರನ್ನು ಮನೆಗೆ ಆಹ್ವಾನಿಸದಿರಿ.
- ❖ ಅನಿವಾರ್ಯ ಕಾರಣಗಳಿಂದ ಮನೆಯಿಂದ ಹೊರ ಹೋಗಬೇಕಾದರೆ ತಪ್ಪದೆ ಸುರಕ್ಷಾ ಕ್ರಮಗಳನ್ನು ಪಾಲನೆ ಮಾಡಿ. ಅನಗತ್ಯವಾಗಿ ಬೇರೆಡೆ ಹೋಗುವುದನ್ನು ನಿಲ್ಲಿಸಿ.
- ❖ ಸುರಕ್ಷತಾ ದೃಷ್ಟಿಯಿಂದ ಎಲ್ಲಾ ನಾಗರಿಕರು ಚಾಚುತಪ್ಪದೆ ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು, ಮಾಸ್ಕ್(ಮುಖಗವಸು) ಧರಿಸುವುದು ಹಾಗೂ ಆಗಿಂದಾಗ್ಗೆ ಸೋಪಿನಿಂದ/ ಸ್ಯಾನಿಟೈಸರ್‌ನಿಂದ ಕೈತೊಳೆಯುವುದನ್ನು ಮರೆಯದಿರಿ.
- ❖ ಹೆಚ್ಚು ಜನ ಗುಂಪು ಸೇರುವುದರಿಂದ ಕೊರೊನಾ ಹರಡುವ ಆತಂಕ ಇದೆ. ಆದ್ದರಿಂದ ನಿಮ್ಮ ಜವಾಬ್ದಾರಿಯನ್ನು ಅರಿತು, ಯಾರೊಬ್ಬರಿಗೂ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿರುತ್ತದೆ.
- ❖ ಕೊರೊನಾ ತುರ್ತು ಪರಿಸ್ಥಿತಿಯಲ್ಲಿ ಜನ ಸಹಕಾರ ನೀಡಿದರೆ ಮಾತ್ರ ಕೊರೊನಾ ವಿರುದ್ಧ ಹೋರಾಡಲು ಸಾಧ್ಯ.
- ❖ ಹಬ್ಬದ ದಿನ ಉತ್ಪತ್ತಿಯಾಗುವ ಕಸವನ್ನು ಎಲ್ಲೂ ಬಿಸಾಡದೆ ಬೆಳಗಿನ ಜಾವ ಬರುವ ಒಣ/ಹಸಿ/ಸ್ಯಾನಿಟರಿ ತ್ಯಾಜ್ಯವನ್ನು ವಿಂಗಡಿಸಿ ಪಾಲಿಕೆವತಿಯಿಂದ ತ್ಯಾಜ್ಯ ಸಂಗ್ರಹಿಸುವವರಿಗೆ ನೀಡುವುದು.

**ಆಯುಕ್ತರು,**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.